# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 05.01.2019 ರಂದು 11–30 ಗಂಟೆಗೆ ಶ್ರೀಮತಿ ಭಾಗ್ಯಮ್ಮ ಕೃಷ್ಣಯ್ಯ, ಬಿ.ಬಿ.ಎಂ.ಪಿ ಸದಸ್ಯರು ವಾರ್ಡ್–71 (ಹೆಗ್ಗನಹಳ್ಳಿ) ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ರವರ ಅಧ್ಯಕ್ಷತೆಯಲ್ಲಿ ಹೆಗ್ಗನಹಳ್ಳಿ ವಾರ್ಡ್ ಪಾಲಿಕೆ ಸದಸ್ಯರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

1. ಶ್ರೀಮತಿ ಭಾಗ್ಯಮ್ಮ ಕೃಷ್ಣಯ್ಯ, ಅಧ್ಯಕ್ಷರು
2. ಶ್ರೀ. ಸುಂದರ್, ಸದಸ್ಯರು
3. ಶ್ರೀ ಲೋಕೇಶ್, ಸದಸ್ಯರು
4. ಶ್ರೀಮತಿ ಪುಷ್ಪಮ್ಮ, ಸದಸ್ಯರು
5. ಶ್ರೀಮತಿ ಹೇಮಲತಾ.ಬಿ.ಕೆ, ಸದಸ್ಯರು
6. ಶ್ರೀಮತಿ ಸರಸ್ವತಿ, ಸದಸ್ಯರು
7. ಶ್ರೀ. ರಾಮಣ್ಣ, ಸದಸ್ಯರು
8. ಶ್ರೀ. ಕಣ್ಣಪ್ಪ, ಸದಸ್ಯರು
9. ಶ್ರೀ. ಕೆಂಪೇಗೌಡ.ಕೆ ಸದಸ್ಯರು
10. ಶ್ರೀ. ಜಿ.ಜಯಪ್ರಕಾಶ್ ಸದಸ್ಯರು
11. ಶ್ರೀ. ಮಂಜುನಾಥ್ ಡಿ.ಎಸ್, ಕಾರ್ಯದರ್ಶಿ ಹಾಗೂ ಸಂಚಾಲಕರು

**: ಚರ್ಚೆಯಾದ ವಿಷಯಗಳು :**

1. ವಾಡ್–71ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ.ಎಸ್ ರವರು ಮಾತನಾಡುತ್ತಾ ಸಭೆಗೆ ಹಾಜರಾದ ವಾರ್ಡ್ ಸಮಿತಿಯ ಮಾನ್ಯ ಅಧ್ಯಕ್ಷರು, ಸದಸ್ಯರು ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

➢ ಮಾನ್ಯ ಅಧ್ಯಕ್ಷರು ಮಾತಾನಾಡುತ್ತಾ, 2018–19ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಕರಪತ್ರಗಳ ಮೂಲಕ ಸಾರ್ವಜನಿಕರಿಗೆ ತಲುಪುವಂತೆ ಮಾಡಿ, ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

➢ ವಾರ್ಡ್ ಸಮಿತಿಯ ಸದಸ್ಯರಾದ ಶ್ರೀ ಲೋಕೇಶ್‌ರವರು, ಮಾತನಾಡಿ ಒಣ ಕಸ ಮತ್ತು ಹಸಿ ಕಸವನ್ನು ಮನೆ ಹಂತದಲ್ಲಿಯೇ ಬೇರ್ಪಡಿಸುವ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಪ್ರಚಾರ ಮಾಡಬೇಕೆಂದು ಕೋರಿದರು.

➢ ಶ್ರೀ ಕಣ್ಣಪ್ಪ ರವರು ಮಾತನಾಡುತ್ತಾ ವಾರ್ಡ್ ವ್ಯಾಪ್ತಿಯಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗುತ್ತಿದ್ದು, ಇದರಿಂದಾಗೀ ಸಾರ್ವಜನಿಕರಿಗೆ ತುಂಬಾ ತೊಂದರೆಯುಂಟಾಗಿದ್ದು, ಇದರ ಬಗ್ಗೆ ಕ್ರಮ ಕೈಗೊಳ್ಳಲು ಕೋರಿದರು.

➢ ಶ್ರೀ ಸುಂದರ್ ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯ ಸಂಜೀವಿನಿ ನಗರ 1ನೇ ಹಂತ, 2ನೇ ಹಂತ ಹಾಗೂ ಸುಂಕದಕಟ್ಟೆ ಫೈಪ್ ಲೇನ್ ರಸ್ತೆಯಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಸದರಿ ಕಾಮಗಾರಿಗಳನ್ನು ಶೀಘ್ರವಾಗಿ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಕೋರಿದರು ಹಾಗೂ ಇನ್ನುಳಿದ ಕಾಮಗಾರಿಗಳನ್ನು ಶ್ರೀಘ್ರವಾಗಿ ಪ್ರಾರಂಭಿಸಿ ಮುಕ್ತಾಯಗೊಳಿಸಲು ಕೋರಿದರು. ಉಳಿದ ಸದಸ್ಯರೆಲ್ಲರಲ್ಲಿಯೂ ಇದೇ ಅಭಿಪ್ರಾಯ ವ್ಯಕ್ತವಾಯಿತು.

➢ ಶ್ರೀ ಈಶ್ವರ್ ರವರು ಮಾತನಾಡುತ್ತಾ, ವಾರ್ಡಿನ ಕೆಲವು ಕಡೆಗಳಲ್ಲಿ ಬೀದಿದೀಪಗಳು ಉರಿಯುತ್ತಿಲ್ಲವೆಂದು ಸಾರ್ವಜನಿಕರು ಕೋರಿದ್ದು, ಸಂಬಂಧಪಟ್ಟವರಿಗೆ ಸೂಚಿಸಿ ದುರಸ್ತಿ ಮಾಡಲು ಕೋರಿರುತ್ತಾರೆ.

➢ ಶ್ರೀಮತಿ ಹೇಮಲತಾ ಮಾತನಾಡುತ್ತಾ, ವಾರ್ಡಿನ ಕೆಲವು ಕಡೆಗಳಲ್ಲಿ ಮರಗಳ ಕೊಂಬೆಗಳನ್ನು ಕತ್ತರಿಸಲು ಸಾರ್ವಜನಿಕರು ಕೋರಿದ್ದು, ಸಂಬಂಧಪಟ್ಟವರಿಗೆ ಸೂಚಿಸಿ ಕತ್ತರಿಸಲು ಕೋರಿರುತ್ತಾರೆ.

➢ ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಇದೇ ರೀತಿ ಪ್ರತಿ ತಿಂಗಳು ಮೊದಲ ಶನಿವಾರ ಬೆಳಿಗ್ಗೆ 11.30 ಘಂಟೆಗೆ ಮಾಸಿಕ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ, ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಸದಸ್ಯರಲ್ಲಿ ಮನವಿ ಮಾಡಿದರು ಹಾಗೂ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್.ಡಿ.ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

5/1/2019

**ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**
**ವಾರ್ಡ್ ನಂ.71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಭಾಗ್ಯಮ್ಮ

**(ಭಾಗ್ಯಮ್ಮ ಕೃಷ್ಣಯ್ಯ)**
**ಪಾಲಿಕೆ ಸದಸ್ಯರು ವಾರ್ಡ್–71 (ಹೆಗ್ಗನಹಳ್ಳಿ)**
**ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು**

ಶ್ರೀಮತಿ ಭಾಗ್ಯಮ್ಮ ಕೃಷ್ಣಯ್ಯ
ಬಿ.ಬಿ.ಎಂ.ಪಿ. ಸದಸ್ಯರು
ವಾರ್ಡ್ ನಂ. 71. ಹೆಗ್ಗನಹಳ್ಳಿ

ಪ್ರತಿಯನ್ನು:
1. ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಅವಗಾಹನೆಗೆ ಮಂಡಿಸಿದೆ.
2. ಜಂಟಿ ಆಯುಕ್ತರು (ದಾಸರಹಳ್ಳಿ ವಲಯ)ರವರ ಅವಗಾಹನೆಗೆ ಮಂಡಿಸಿದೆ.
3. ಮುಖ್ಯ ಅಭಿಯಂತರರು (ದಾಸರಹಳ್ಳಿ ವಲಯ) ರವರ ಅವಗಾಹನೆಗೆ ಮಂಡಿಸಿದೆ.
4. ಕೌನ್ಸಿಲ್ ಕಾರ್ಯದರ್ಶಿ ರವರ ಅವಗಾಹನೆಗೆ ಮಂಡಿಸಿದೆ.
5. ಕಾ.ಪಾ.ಅ (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ.
6. ವಾರ್ಡ್ 71 ರ ಸಮಿತಿಯ ಸದಸ್ಯರು ರವರಿಗೆ.
7. ಕಲ್ಯಾಣಾಧಿಕಾರಿಗಳು, ದಾಸರಹಳ್ಳಿ ವಲಯರವರ ಮಾಹಿತಿಗಾಗಿ,
8. ಅರಣ್ಯಾಧಿಕಾರಿಗಳು, ದಾಸರಹಳ್ಳಿ ವಲಯರವರ ಮಾಹಿತಿಗಾಗಿ,
9. ಪಶುಸಂಗೋಪನಾಧಿಕಾರಿ, ದಾಸರಹಳ್ಳಿ ವಲಯರವರ ಮಾಹಿತಿಗಾಗಿ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, (ಘನ ತ್ಯಾಜ್ಯ & ನಿರ್ವಹಣೆ) ದಾಸರಹಳ್ಳಿ ವಲಯವರರಿಗೆ